ಕರ್ನಾಟಕ ಸರ್ಕಾರದ ಸಾರ್ವಜನಿಕ ಶಿಕ್ಷಣ ಇಲಾಖೆಯ ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು-1

ಸಂಖ್ಯೆ:ಆ(ಆ.ಶಾ)ಸ್ವಾ.ದಿ.1/2011-12. ದಿನಾಂಕ: 12-08-2011

## ಜ್ಞಾ ಪ ನ

ವಿಷಯ:- 2011ನೇ ಸಾಲಿನ ಆಗಸ್ಟ್ 15ನೇ ತಾರೀಖಿನಂದು ಸ್ವಾತಂತ್ರ್ಯ ದಿನಾಚರಣೆಯನ್ನು ಅರ್ಥಪೂರ್ಣವಾಗಿ ಆಚರಿಸುವ ಕುರಿತು.

ಸ್ವಾತಂತ್ರ್ಯ ದಿನಾಚರಣೆಯನ್ನು ಪ್ರತೀ ವರ್ಷ ಆಗಸ್ಟ್ 15 ರಂದು ನಡೆಸುತ್ತಿರುವುದು ಸರಿಯಷ್ಟೇ. ಈ ದಿನ ಅತ್ಯಂತ ಪವಿತ್ರವಾದ ದಿನ. ಈ ರಾಷ್ಟ್ರೀಯ ಹಬ್ಬವನ್ನು ರಾಜ್ಯದ ಎಲ್ಲಾ ಶಾಲೆಗಳಲ್ಲಿ ಸಡಗರ ಸಂಭ್ರಮಗಳೊಂದಿಗೆ ಅರ್ಥಪೂರ್ಣವಾಗಿ ಆಚರಿಸಬೇಕಾಗುತ್ತದೆ.

ಈ ರಾಷ್ಟ್ರೀಯ ಹಬ್ಬವನ್ನು ರಾಜ್ಯದ ಎಲ್ಲಾ ಶಾಲೆಗಳಲ್ಲಿ ಅಂದರೆ, ಸರ್ಕಾರಿ, ಅನುದಾನಿತ, ಅನುದಾನರಹಿತ ಸಿ.ಬಿ.ಎಸ್.ಇ., ಐ.ಸಿ.ಎಸ್.ಇ. ಪ್ರಾಥಮಿಕ/ಪ್ರೌಢ ಶಾಲೆಗಳಲ್ಲಿ ಕಡ್ಡಾಯವಾಗಿ ಆಗಸ್ಟ್ 15 ರಂದು ಸ್ವಾತಂತ್ರ್ಯ ದಿನಾಚರಣೆಯನ್ನು ಆಚರಿಸಲು ಈ ಮೂಲಕ ತಿಳಿಸಿದೆ.

ಆ ದಿನದಂದು ಶಿಕ್ಷಕರು ಮತ್ತು ವಿದ್ಯಾರ್ಥಿಗಳು ಕಡ್ಡಾಯವಾಗಿ ಭಾಗವಹಿಸಿ ಸಮಾರಂಭವನ್ನು ಯಶಸ್ವಿಗೊಳಿಸಲು ತಿಳಿಸಿದೆ.

**(ಆಯುಕ್ತರ ಆದೇಶದ ಮೇರೆಗೆ)**

ನಿರ್ದೇಶಕರು(ಪ್ರಾಥಮಿಕ ಶಿಕ್ಷಣ),
ಸಾರ್ವಜನಿಕ ಶಿಕ್ಷಣ ಇಲಾಖೆ.

ಗೆ,

1) ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಗುಲ್ಬರ್ಗಾ/ಧಾರವಾಡ ರವರಿಗೆ ಮಾಹಿತಿಗಾಗಿ ಹಾಗೂ ಅಗತ್ಯ ಕ್ರಮಕ್ಕಾಗಿ,

2) ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರು(ಆಡಳಿತ) ಮುಂದಿನ ಕ್ರಮಕ್ಕಾಗಿ,

3) ರಾಜ್ಯದ ಎಲ್ಲಾ ಉಪನಿರ್ದೇಶಕರು(ಅಭಿವೃದ್ಧಿ) ಮುಂದಿನ ಕ್ರಮಕ್ಕಾಗಿ

3) ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಮುಂದಿನ ಕ್ರಮಕ್ಕಾಗಿ